**ಕರ್ನಾಟಕ ವಿಧಾನ ಪರಿಷತ್ತು**

ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **48 (78)**

ಉತ್ತರಿಸುವ ಸಚಿವರು : ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

ಉತ್ತರಿಸಬೇಕಾದ ದಿನಾಂಕ : **04–03–2025**

*****

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಮತ್ತು ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಕಲಬುರಗಿ ಜಿಲ್ಲೆಯ 1000 ಎಕರೆ ಪ್ರದೇಶದಲ್ಲಿ ಪಿ.ಪಿ.ಪಿ ಮಾದರಿಯಲ್ಲಿ ಮೆಗಾ ಟೆಕ್ಸ್‌ಟೈಲ್ ಪಾರ್ಕನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದ್ದು ನಿಜವೇ; | ಹೌದು. |
| ಆ) | ಹಾಗಿದ್ದಲ್ಲಿ, ಸದರಿ ಯೋಜನೆಗೆ ಪೂರಕವಾದ ಮೂಲ ಸೌಕರ್ಯಕ್ಕಾಗಿ ಸರ್ಕಾರದ ವತಿಯಿಂದ ಎಷ್ಟು ಅನುದಾನವನ್ನು ಒದಗಿಸಲಾಗಿದೆ; | ಕಲಬುರಗಿಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಜಂಟಿ ಸಹಭಾಗಿತ್ವದಲ್ಲಿ PM-MITRA Park ಯೋಜನೆಯಡಿ ಜವಳಿ ಪಾರ್ಕ್‌ನ ಸ್ಥಾಪನೆಗೆ ದಿನಾಂಕ:17.09.2024 ರಂದು ಜರುಗಿದ ಸಚಿವ ಸಂಪುಟ ಸಭೆಯಲ್ಲಿ PM-MITRA Park ಗೇಟ್ ವರೆಗೆ ಮೂಲಭೂತ ಸೌಕರ್ಯಗಳಾದ ರಸ್ತೆ, ನೀರು ಹಾಗೂ ವಿದ್ಯುತ್ ಸಂಪರ್ಕ ಒದಗಿಸಲು ರೂ.390.2681 ಕೋಟಿಗಳಿಗೆ ಅನುಮೋದನೆ ನೀಡಿದ್ದು, ಅದರಂತೆ ಸರ್ಕಾರದ ಆದೇಶ ಹೊರಡಿಸಲಾಗಿದೆ.<br><br>ಸದರಿ ಕಾಮಗಾರಿಗಳಿಗೆ ಪ್ರಸ್ತುತ ವರ್ಷ ರೂ.50.00 ಕೋಟಿಗಳನ್ನು ಮತ್ತು ಮುಂದಿನ ಎರಡು ವರ್ಷಗಳಲ್ಲಿ ರೂ.100.00 ಕೋಟಿಗಳನ್ನು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KKRDB) ಯಿಂದ ಭರಿಸಲು ಹಾಗೂ ಬಾಕಿ ಮೊತ್ತವನ್ನು ರಾಜ್ಯ ಸರ್ಕಾರದ ಆಯವ್ಯಯದಿಂದ ಭರಿಸಲು ಆದೇಶಿಸಲಾಗಿರುತ್ತದೆ. |
| ಇ) | ಈ ಯೋಜನೆಯ ಅನುಷ್ಠಾನದಿಂದ ರಾಜ್ಯ ಜಿಲ್ಲೆಯಲ್ಲಿ ಎಷ್ಟು ಉದ್ಯೋಗಗಳು ಸೃಜನೆಯಾಗುವ ನಿರೀಕ್ಷೆಯಿದೆ ಎಂಬುದರ ಬಗ್ಗೆ ಮಾಹಿತಿ ನೀಡುವುದು? | ಈ ಯೋಜನೆಯ ಅನುಷ್ಠಾನದಿಂದ ರಾಜ್ಯದಲ್ಲಿ ನೇರವಾಗಿ ಒಂದು ಲಕ್ಷ ಉದ್ಯೋಗ ಹಾಗೂ ಪರೋಕ್ಷವಾಗಿ ಎರಡು ಲಕ್ಷ ಉದ್ಯೋಗ ಸೃಜನೆಯಾಗುವ ನಿರೀಕ್ಷೆಯಿದೆ. |

ಸಂಖ್ಯೆ: **CI 22 JAKE 2025**

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು